ಕರ್ನಾಟಕ ಸರ್ಕಾರ

**Government of Karnataka**

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.

**Office of the Director,**
Department of Pre University Education,
18th Cross,Sampige Road, Malleshwaram,
Bengaluru-560012.

==========================================================

ಸಂಖ್ಯೆ: ಪಪೂಶಿಇ/ಪರೀಕ್ಷೆ/ದ್ವಿಪುಫ/ /2020-21 ದಿನಾಂಕ:07-07-2021

## ಸುತ್ತೋಲೆ

**ವಿಷಯ :-** 2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಈ ಹಿಂದಿನ ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಫಲಿತಾಂಶವನ್ನು ತಿರಸ್ಕರಣೆ ಮಾಡಿ ಪುನರಾವರ್ತಿತ ಅಭ್ಯರ್ಥಿಗಳಾಗಿ ನೊಂದಾಯಿಸಿಕೊಂಡಿರುವ ವಿದ್ಯಾರ್ಥಿಗಳ ಫಲಿತಾಂಶದ ಕುರಿತು.

**ಉಲ್ಲೇಖ:-** 1. ಈ ಕಛೇರಿ ಪ್ರಕಟಣೆ ಸಂಖ್ಯೆ:ಪಪೂಶಿಇ/ಪರೀಕ್ಷೆ/ದ್ವಿಪಪ್ರ/2020-21 ದಿನಾಂಕ:03.06.2021.
2. ಸರ್ಕಾರದ ಆದೇಶ ಸಂಖ್ಯೆ:ಇಪಿ 19 ಟಿಪಿಯು 2021, ಬೆಂಗಳೂರು ದಿನಾಂಕ:05.07.2021

*****

ಕೋವಿಡ್-19ರ ಸಾಂಕ್ರಾಮಿಕ ರೋಗದ ತೀವ್ರತೆ ಹೆಚ್ಚಾಗುತ್ತಿದ್ದ ಹಿನ್ನೆಲೆಯಲ್ಲಿ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ಉಲ್ಲೇಖ-1ರ ಪ್ರಕಟಣೆಯಲ್ಲಿ ರದ್ದುಗೊಳಿಸಿದೆ.

ಉಲ್ಲೇಖ-2ರ ಸರ್ಕಾರದ ಆದೇಶದಂತೆ 2019ರ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆ, 2020ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆ ಮತ್ತು 2020ರ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳಲ್ಲಿ ಉತ್ತೀರ್ಣ/ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಉತ್ತೀರ್ಣಗೊಂಡ ವಿಷಯಗಳಿಗೆ ನಿಯಮಾನುಸಾರ ಫಲಿತಾಂಶವನ್ನು ತಿರಸ್ಕರಿಸಿ, 2021ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳು ಈ ಹಿಂದಿನ ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಪಡೆದ ಅಂಕಗಳನ್ನೇ ಮರುಪಡೆಯಲು ಅವಕಾಶ ಕಲ್ಪಿಸಲಾಗಿದೆ. ಅಂತಹ ವಿದ್ಯಾರ್ಥಿಗಳು ಹಿಂದಿನ ದ್ವಿತೀಯ ಪಿ.ಯು.ಸಿ ಪರೀಕ್ಷೆಯ ಫಲಿತಾಂಶದಲ್ಲಿ ಪಡೆದ ಅಂಕಗಳನ್ನೇ ಮರುಪಡೆಯಲು ತಮ್ಮ ಕಾಲೇಜುಗಳ ಪ್ರಾಂಶುಪಾಲರುಗಳ ಮೂಲಕ ನಿಯಮಾನುಸಾರ ಅರ್ಜಿಯನ್ನು ಮುಚ್ಚಳಿಕೆಪತ್ರ ಸಹಿತ ಸಲ್ಲಿಸಲು ಅವಕಾಶ ಕಲ್ಪಿಸಿದೆ.

ವಿದ್ಯಾರ್ಥಿಗಳು ಹಿಂದಿನ ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮರುಪಡೆಯಲು ಇಚ್ಚಿಸದಿದ್ದಲ್ಲಿ, ಮುಂದಿನ ದಿನಗಳಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಹಾಜರಾಗುವುದು. ಪರೀಕ್ಷೆಗೆ ಹಾಜರಾಗಲು ಇಚ್ಚಿಸಿದಲ್ಲಿ ವಿದ್ಯಾರ್ಥಿಗಳು ತಮ್ಮ ಕಾಲೇಜು ಪ್ರಾಂಶುಪಾಲರುಗಳ ಮೂಲಕ ನಿಯಮಾನುಸಾರ ಅರ್ಜಿಯನ್ನು, ಮುಚ್ಚಳಿಕೆಪತ್ರ ಸಹಿತ ಸಲ್ಲಿಸಲು ಅವಕಾಶ

ಕಲ್ಪಿಸಿದೆ. ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳಿಗೆ ಈ ಹಿಂದಿನ ಫಲಿತಾಂಶದ ಅಂಕಗಳನ್ನು ಮರುನೀಡಲು ಸಾಧ್ಯವಿರುವುದಿಲ್ಲ ಹಾಗೂ ಪರೀಕ್ಷೆಯಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ.

| ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಲು ಕೊನೆ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಲು ಕೊನೆಯ ದಿನಾಂಕ | ಉಪನಿರ್ದೇಶಕರ ಕಛೇರಿಯಿಂದ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ಕೊನೆಯ ದಿನಾಂಕ |
|---|---|---|
| 12.07.2021 | 15.07.2021 | 19.07.2021 |

ಮೇಲ್ಕಂಡಂತೆ ಈ ಹಿಂದಿನ ಪರೀಕ್ಷೆಗಳ ಫಲಿತಾಂಶವನ್ನು ತಿರಸ್ಕರಣೆ ಮಾಡಿ 2021ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ಈಗಾಗಲೇ ಶುಲ್ಕ ಪಾವತಿಸಿ ನೋಂದಾಯಿಸಿಕೊಂಡಿರುವ ಪುನರಾವರ್ತಿತ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಈ ಹಿಂದಿನ ಫಲಿತಾಂಶ ಮರು ಪಡೆಯುವ ಅಥವಾ ಮುಂದಿನ ದಿನಗಳಲ್ಲಿ ಪರೀಕ್ಷೆಗೆ ಹಾಜರಾಗುವ ಸಂಬಂಧ ಈ ಎರಡರಲ್ಲಿ ಒಂದು ವಿಧಾನಕ್ಕೆ ವಿದ್ಯಾರ್ಥಿಗಳಿಂದ ಮನವಿಗಳನ್ನು ಮುಚ್ಚಳಿಕೆಪತ್ರಸಹಿತ ಪಡೆದು ಪರಿಶೀಲಿಸಿ, ತದ ನಂತರ ಮುಂದಿನ ಕ್ರಮಕ್ಕೆ ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು. **ಈ ಹಿಂದಿನ ಪರೀಕ್ಷೆಗಳ ಫಲಿತಾಂಶವನ್ನು ತಿರಸ್ಕರಣೆ ಮಾಡಿ 2021ರ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗೆ ನೊಂದಾಯಿಸಿಕೊಂಡಿರದ ವಿದ್ಯಾರ್ಥಿಗಳಿಂದ ಹೊಸದಾಗಿ ಅರ್ಜಿಗಳನ್ನು ಸ್ವೀಕರಿಸಲು ಅವಕಾಶ ಇರುವುದಿಲ್ಲ.** ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಕೊನೆಯ ದಿನಾಂಕದೊಳಗೆ ಅರ್ಜಿಗಳನ್ನು ಸ್ವೀಕರಿಸಿ, ಜಿಲ್ಲಾ ಉಪನಿರ್ದೇಶಕರುಗಳ ಕಛೇರಿಗಳಿಗೆ ಮತ್ತು ಕೇಂದ್ರ ಕಛೇರಿಗೆ ಸಲ್ಲಿಸಲು ಸೂಕ್ತ ಕ್ರಮವಹಿಸಲು ಆದೇಶಿಸಿದೆ. ಯಾವುದೇ ರೀತಿಯ ಲೋಪಗಳು ಕಂಡು ಬಂದಲ್ಲಿ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು ಮತ್ತು ಜಿಲ್ಲಾ ಉಪನಿರ್ದೇಶಕರುಗಳ ವಿರುದ್ದ ಸೂಕ್ತ ಕ್ರಮ ಜರುಗಿಸಲಾಗುವುದು.

Snehal

ನಿರ್ದೇಶಕರು
**ಪದವಿ ಪೂರ್ವ ಶಿಕ್ಷಣ ಇಲಾಖೆ**

<u>ಪ್ರತಿಗಳು:</u>

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ.
   ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು) ಪ್ರತಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
3. ಸಹಾಯಕ ನಿರ್ದೇಶಕರು, ಗಣಕಶಾಖೆ, ಪ.ಪೂ.ಶಿ.ಇಲಾಖೆ, ಬೆಂಗಳೂರು.
4. ಸಹಾಯಕ ನಿರ್ದೇಶಕರು, ಇ–ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).

6. ಕಛೇರಿ ಪ್ರತಿ.